# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1441 |
| ಸದಸ್ಯರ ಹೆಸರು | : | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 30-12-2022 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ.ಸಂ | ವಿಷಯ | ಉತ್ತರ |
|---|---|---|
| ಅ) | ಪರಿಶಿಷ್ಟ ಜಾತಿ ವಿದ್ಯಾರ್ಥಿಗಳ ಉನ್ನತ ವ್ಯಾಸಂಗದ ಸಲುವಾಗಿ ವಿದೇಶ ವ್ಯಾಸಂಗ ವೇತನ ನೀಡುವಲ್ಲಿ ಆಯ್ಕೆಯ ಮಾನದಂಡಗಳೇನು; (ವಿವರ ನೀಡುವುದು) | ಪರಿಶಿಷ್ಟ ಜಾತಿ ಸಮುದಾಯದವರ ಶೈಕ್ಷಣಿಕ ಹಾಗೂ ಆರ್ಥಿಕ ಅಭಿವೃದ್ಧಿಗಾಗಿ ಸಮಾಜ ಕಲ್ಯಾಣ ಇಲಾಖೆಯ ಮೂಲಕ "ಪ್ರಬುದ್ಧ" ವಿದೇಶಿ ಉನ್ನತ ವ್ಯಾಸಂಗ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿದೆ.<br><br>ವಿದೇಶಿ ವ್ಯಾಸಂಗಕ್ಕೆ ಇರುವ ಮಾನದಂಡಗಳು:<br><br>1. ಅಭ್ಯರ್ಥಿಯು ಕರ್ನಾಟಕದ ನಿವಾಸಿಯಾಗಿರಬೇಕು.<br>2. ಕರ್ನಾಟಕ ರಾಜ್ಯ ಸರ್ಕಾರ ಪ್ರಕಟಿಸಿದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿಸಬೇಕು.<br>3. ವಿದೇಶಿ ವಿಶ್ವ ವಿದ್ಯಾಲಯದಲ್ಲಿ ಸ್ನಾತಕೋತ್ತರ ಪದವಿ ಅಧ್ಯಯನ ಮಾಡಲು ಉದ್ದೇಶಿಸಿರುವ ಅಭ್ಯರ್ಥಿಯು ಯು.ಜಿ.ಸಿ. ಮಾನ್ಯತೆ ಪಡೆದ ವಿಶ್ವ ವಿದ್ಯಾಲಯದಿಂದ ಪದವಿಯನ್ನು ಪಡೆದಿರಬೇಕು. ಪಿ.ಹೆಚ್.ಡಿ. ಅಧ್ಯಯನಕ್ಕೆ ತೆರಳುವ ಅಭ್ಯರ್ಥಿಗಳು ಸ್ನಾತಕೋತ್ತರ ಪದವಿ ಪಡೆದಿರಬೇಕು.<br>4. ಪ್ರಬುದ್ಧ ಯೋಜನೆಯಡಿ ಸ್ನಾತಕೋತ್ತರ ಪದವಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಪದವಿಯಲ್ಲಿ ಕನಿಷ್ಠ 55% ರಷ್ಟು ಅಂಕವನ್ನು ಗಳಿಸಿರಬೇಕು, ಪಿ.ಹೆಚ್.ಡಿ ಪದವಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಸ್ನಾತಕೋತ್ತರ ಪದವಿಯಲ್ಲಿ 55% ರಷ್ಟು ಅಂಕವನ್ನು ಗಳಿಸಿರಬೇಕು.<br>5. ವಾರ್ಷಿಕ ರೂ. 25.00 ಲಕ್ಷ ವರೆಗಿನ ಕೌಟುಂಬಿಕ ಆದಾಯ ಹೊಂದಿರುವವರು ಅರ್ಜಿ ಸಲ್ಲಿಸಬಹುದು. ಆದರೆ ಕುಟುಂಬದ ವಾರ್ಷಿಕ |

<table>
<tr><td></td><td></td><td>ಆದಾಯದ ಆಧಾರದ ಮೇಲೆ ಸಹಾಯ ಧನವನ್ನು ಪೂರ್ಣ ಪ್ರಮಾಣದಲ್ಲಿ ಹಾಗೂ ಭಾಗಶಃ ರೂಪದಲ್ಲಿ ನೀಡಲಾಗುತ್ತದೆ.<br>6. ಅಭ್ಯರ್ಥಿಗಳನ್ನು ಪದವಿಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡುವುದು, ಪಿ.ಹೆಚ್.ಡಿ. ಅಭ್ಯರ್ಥಿಗಳನ್ನು ಸ್ನಾತಕೋತ್ತರ ಪದವಿಯಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.<br>7. ಸ್ನಾತಕೋತ್ತರ ಅಥವಾ ಪಿ.ಹೆಚ್.ಡಿ. ಎರಡರಲ್ಲಿ ಒಂದಕ್ಕೆ ಒಂದು ಬಾರಿ ಮಾತ್ರ ಇಲಾಖೆಯಿಂದ ಧನ ಸಹಾಯವನ್ನು ಪಡೆಯಲು ಅರ್ಹರಿರುತ್ತಾರೆ.<br>8. ಅಭ್ಯರ್ಥಿಯು QS / US News Overall Global Ranking 500 ರೊಳಗೆ ಸ್ಥಾನ ಪಡೆದ ವಿದೇಶಿ ವಿಶ್ವ ವಿದ್ಯಾಲಯ/ಸಂಸ್ಥೆಗಳಲ್ಲಿ Unconditional Offer Letter ಪಡೆದ ಅಭ್ಯರ್ಥಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದು.</td></tr>
<tr><td>ಆ)</td><td>ಕಳೆದ ಮೂರು ವರ್ಷಗಳಿಂದ ಎಷ್ಟು ವಿದ್ಯಾರ್ಥಿಗಳನ್ನು ಉನ್ನತ ವ್ಯಾಸಂಗಕ್ಕೆ ಕಳುಹಿಸಿಕೊಡಲಾಗಿದೆ; (ವರ್ಷವಾರು ವಿವರ ನೀಡುವುದು)</td><td>ರಾಜ್ಯದಲ್ಲಿ ಪರಿಶಿಷ್ಟ ಜಾತಿ ಸಮುದಾಯದ ವಿದ್ಯಾರ್ಥಿಗಳಿಗೆ ವಿದೇಶದಲ್ಲಿ ಉನ್ನತ ವ್ಯಾಸಂಗ ಮಾಡುವ ಸೌಲಭ್ಯವನ್ನು ಕಲ್ಪಿಸಲಾಗಿದ್ದು ಕಳೆದ 3 ವರ್ಷಗಳಲ್ಲಿ ಇದರ ಪ್ರಯೋಜನ ಪಡೆದ ಅಭ್ಯರ್ಥಿಗಳ ಸಂಖ್ಯಾವಾರು ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ.ಸಂ</th><th>ವರ್ಷ</th><th>ಪ.ಜಾತಿ</th></tr>
<tr><td>01</td><td>2020-21</td><td>45</td></tr>
<tr><td>02</td><td>2021-22</td><td>70</td></tr>
<tr><td>03</td><td>2022-23</td><td>70</td></tr>
<tr><td></td><td>ಒಟ್ಟು</td><td>185</td></tr>
</table></td></tr>
<tr><td>ಇ)</td><td>ಯಾವ ಯಾವ ಉನ್ನತ ಪದವಿ ಕೋರ್ಸ್‌ಗಳಿಗೆ ಆಯ್ಕೆ ಮಾಡಲಾಗುವುದು;</td><td>ಇಂಜಿನಿಯರಿಂಗ್, ಮ್ಯಾನೆಜ್‌ಮೆಂಟ್, ಪ್ಯೂರ್ ಸೈನ್ಸ್ ಅಂಡ್ ಅಪ್ಲೈಡ್ ಸೈನ್ಸ್, ಅಗ್ರಿಕಲ್ಚರ್ ಸೈನ್ಸ್, ಮೆಡಿಸಿನ್, ಇಂಟರ್‌ನ್ಯಾಷನಲ್ ಕಾಮರ್ಸ್, ಇಂಟರ್‌ನ್ಯಾಷನಲ್ ಎಕನಾಮಿಕ್ಸ್, ಇಂಟರ್‌ನ್ಯಾಷನಲ್ ಅಕೌಂಟಿಂಗ್ ಫಿನಾನ್ಸ್, ಹ್ಯೂಮಾನಿಟೀಸ್, ಸೋಶಿಯಲ್ ಸೈನ್ಸ್, ಫೈನ್ ಆರ್ಟ್ಸ್, ಲಾ ಮತ್ತು ಹಿಸ್ಟರಿ ಅಧ್ಯಯನ ಕ್ಷೇತ್ರಗಳಲ್ಲಿ ಸ್ನಾತಕೋತ್ತರ ಮತ್ತು ಪಿ.ಹೆಚ್.ಡಿ ಕೋರ್ಸ್‌ಗಳಿಗೆ ಅಧ್ಯಯನ ಮಾಡಲು ಆಯ್ಕೆ ಮಾಡಲಾಗುವುದು.</td></tr>
<tr><td>ಈ)</td><td>ಸದರಿ ವಿದ್ಯಾರ್ಥಿಗಳಿಗೆ ವಾರ್ಷಿಕ ಎಷ್ಟು ಕಂತುಗಳಲ್ಲಿ ಹಣ ಬಿಡುಗಡೆಗೊಳಿಸಲಾಗುವುದು; (ವಿವರ ನೀಡುವುದು)</td><td>ಸದರಿ ವಿದ್ಯಾರ್ಥಿಗಳಿಗೆ ಧನ ಸಹಾಯವನ್ನು ಸೆಮಿಸ್ಟರ್‌ವಾರು ವಿಂಗಡಿಸಿ ವಾರ್ಷಿಕ 2 ಕಂತುಗಳಲ್ಲಿ ಬಿಡುಗಡೆ ಮಾಡಲಾಗುವುದು.</td></tr>
</table>

<table>
<tr><td></td><td></td><td>ಮೊದಲ ಸೆಮಿಸ್ಟರ್ ಹೊರತುಪಡಿಸಿ ಉಳಿದ ಸೆಮಿಸ್ಟರ್ ಗಳ ಧನ ಸಹಾ ಬಿಡುಗಡೆ ಪೂರ್ವದಲ್ಲಿ ಅಭ್ಯರ್ಥಿಗಳ ಹಿಂದಿನ ಸೆಮಿಸ್ಟರ್ ನಲ್ಲಿನ ಶೈಕ್ಷಣಿಕ ಪ್ರಗತಿ ಹಾಗೂ ಮುಂದಿನ ಸೆಮಿಸ್ಟರ್‌ಗೆ ಪ್ರವೇಶ ಪಡೆದಿರುವುದನ್ನು ಖಚಿತಪಡಿಸಿಕೊಂಡು ಧನ ಸಹಾಯ ಬಿಡುಗಡೆ ಮಾಡಲಾಗುವುದು.</td></tr>
<tr><td>ಉ)</td><td>ಕಳೆದ ಮೂರು ವರ್ಷಗಳಲ್ಲಿ ತಲಾ ವಿದ್ಯಾರ್ಥಿಗಳಿಗೆ ಬಿಡುಗಡೆಗೊಳಿಸಲಾದ ಮೊತ್ತವೆಷ್ಟು? (ವರ್ಷವಾರು ವಿವರ ನೀಡುವುದು)</td><td>ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆಗೊಳಿಸಲಾದ ಅನುದಾನದ ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ.ಸಂ</th><th>ವರ್ಷ</th><th>ಅಭ್ಯರ್ಥಿಗಳಿಗೆ ಬಿಡುಗಡೆ ಮಾಡಿದ ಅನುದಾನ<br><br>(ರೂ.ಲಕ್ಷಗಳಲ್ಲಿ)</th></tr>
<tr><td>01</td><td>2020-21</td><td>1000.00</td></tr>
<tr><td>02</td><td>2021-22</td><td>1800.00</td></tr>
<tr><td>03</td><td>2022-23</td><td>1000.00</td></tr>
<tr><td></td><td>ಒಟ್ಟು</td><td>3800.00</td></tr>
</table>
</td></tr>
</table>

**ಸಕಇ 766 ಎಸ್‌ಎಲ್‌ಪಿ 2022**

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ
ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು